All India Radio: Bangalore
National Bulletin In Kannada
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

22.01.2026 19.35 p.m.

***************

ಮುಖ್ಯಾಂಶಗಳು

- ನಾಳೆ ತಿರುವನಂತಪುರಂನಲ್ಲಿ ನಾಗರಕೋಯಿಲ್-ಮಂಗಳೂರು ಎಕ್ಸ್‌ಪ್ರೆಸ್ ರೈಲು ಸೇರಿದಂತೆ ನಾಲ್ಕು ಅಮೃತ್ ಭಾರತ್ ರೈಲುಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ
- ಭ್ರಷ್ಟಾಚಾರ ನಿವಾರಿಸಿ ಗ್ರಾಮ ಪಂಚಾಯಿತಿಗೆ ಹೆಚ್ಚಿನ ಅಧಿಕಾರ ನೀಡಲು ವಿಕಸಿತ ಭಾರತ ಜಿ ರಾಮ್ ಜಿ ಯೋಜನೆ - ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಸ್ಪಷ್ಟನೆ
- ಪ್ರಧಾನಮಂತ್ರಿ ಗ್ರಾಮಸಡಕ್ ಯೋಜನೆ-೪; ಜಮ್ಮು-ಕಾಶ್ಮೀರ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ೧೦ ಸಾವಿರ ಕಿಲೋಮೀಟರ್‌ಗಳಿಗೂ ಹೆಚ್ಚು ರಸ್ತೆ ಮಂಜೂರು
- ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್; ಟಾಸ್ ಗೆದ್ದ ಯುಪಿ ವಾರಿಯರ್ಸ್ ತಂಡ ಫೀಲ್ಡಿಂಗ್ ಆಯ್ಕೆ

***************

ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ ಕೇರಳದ ತಿರುವನಂತಪುರದಲ್ಲಿ ನಾಗರಕೋಯಿಲ್ - ಮಂಗಳೂರು ಅಮೃತ ಭಾರತ್ ಎಕ್ಸ್ ಪ್ರೆಸ್ ರೈಲು ಸೇವೆಗೆ ಅಧಿಕೃತವಾಗಿ ಚಾಲನೆ ನೀಡಲಿದ್ದಾರೆ.

ಹೊಸ ರೈಲು ತಮಿಳುನಾಡು, ಕೇರಳ ಮತ್ತು ಕರ್ನಾಟಕವನ್ನು ಸಂಪರ್ಕಿಸುತ್ತವೆ. ಅಮೃತ ಎಕ್ಸ್ ಪ್ರೆಸ್ ರೈಲುಗಳ ಉದ್ಘಾಟನೆಯ ಭಾಗವಾಗಿ ಈ ರೈಲಿಗೆ ಚಾಲನೆ ದೊರೆಯಲಿದ್ದು, ಪ್ರಯಾಣಿಕರ ಸೌಕರ್ಯಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ತಮಿಳುನಾಡಿನ ನಾಗರಕೋಯಿಲ್‌ನಿಂದ ಕೇರಳದ ಮೂಲಕ ಕರಾವಳಿ ಕರ್ನಾಟಕದ ಮಂಗಳೂರು ಸಂಪರ್ಕಿಸುತ್ತದೆ.

ಇದು ವಾರಕ್ಕೊಮ್ಮೆ ಸಂಚರಿಸುವ ರೈಲಾಗಿದ್ದು, ವಂದೇ ಭಾರತ್ ರೈಲಿನಂತೆಯೇ ಹೆಚ್ಚಿನ ಪ್ರಯಾಣಿಕರ ಸಾಮರ್ಥ್ಯ ಹಾಗೂ ವೇಗದ ವಿನ್ಯಾಸವನ್ನು ಹೊಂದಿದೆ. ಮೂರು ರಾಜ್ಯಗಳಾದ್ಯಂತ ಪ್ರಮುಖ ನಗರಗಳನ್ನು ಸಂಪರ್ಕಿಸುವ ಮೂಲಕ ಈ ರೈಲು ಪ್ರಾದೇಶಿಕ ಸಂಚಾರವನ್ನು ಗಮನಾರ್ಹವಾಗಿ ಸುಧಾರಿಸುತ್ತದೆ.

ಈ ಮಾರ್ಗವು ಹಲವಾರು ಪ್ರಮುಖ ಪ್ರವಾಸಿ ಮತ್ತು ತೀರ್ಥಯಾತ್ರೆಯ ಸ್ಥಳಗಳಿಗೆ ಸುಗಮ ಪ್ರಯಾಣವನ್ನು ಕಲ್ಪಿಸುತ್ತದೆ. ಇವುಗಳಲ್ಲಿ ಭಾರತದ ದಕ್ಷಿಣ ತುದಿ ಕನ್ಯಾಕುಮಾರಿ ಸೇರಿದೆ. ತಿರುವಂತಪುರಂನಲ್ಲಿರುವ ಪದ್ಮನಾಭ ಸ್ವಾಮಿ ದೇವಾಲಯ ಪ್ರಮುಖ ಆಕರ್ಷಣೆಯಾಗಿದೆ.

ವಿದ್ಯಾರ್ಥಿಗಳು ವಿಶ್ವವಿದ್ಯಾಲಯಗಳು, ತರಬೇತಿ ಕೇಂದ್ರಗಳಿಗೆ ಸುಲಭವಾಗಿ ಪ್ರಯಾಣಿಸಬಹುದು, ವ್ಯಾಪಾರಿಗಳು ಮತ್ತು ಸಣ್ಣ ಉದ್ಯಮಿಗಳು ಇದರ ಪ್ರಯೋಜನ ಪಡೆಯಲಿದ್ದಾರೆ.

***************

ಭ್ರಷ್ಟಾಚಾರ ನಿವಾರಿಸಿ ಗ್ರಾಮ ಪಂಚಾಯಿತಿಗಳಿಗೆ ನಿರ್ಣಯ ಪ್ರಕ್ರಿಯೆಯಲ್ಲಿ ಹೆಚ್ಚಿನ ಅಧಿಕಾರ ನೀಡಿ, ಕಾರ್ಮಿಕರಿಗೆ ನೂರು ದಿನಗಳ ಬದಲು ೧೨೫ ದಿನಗಳ ಉದ್ಯೋಗ ಸೃಷ್ಟಿಸಲು ಕೇಂದ್ರ ಸರ್ಕಾರ ವಿಕಸಿತ

ಭಾರತ - ಜಿ ರಾಮ್ ಜಿ ಯೋಜನೆಯನ್ನು ಜಾರಿಗೆ ತಂದಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ನವೀಕೃತ ಉದ್ಯೋಗ ಖಾತರಿ ಯೋಜನೆಯಡಿ ತಂತ್ರಜ್ಞಾನದ ಬಳಕೆಯಾಗುತ್ತಿದೆ ಹಾಗೂ ಕೃಷಿ ಚಟುವಟಿಕೆ ನಡೆಯುವ ಸಮಯದಲ್ಲಿ ಕಾರ್ಮಿಕರನ್ನು ಒದಗಿಸುವ ವ್ಯವಸ್ಥೆ ಮಾಡಲಾಗಿದೆ ಎಂದು ಅವರು ತಿಳಿಸಿದರು.

ಕಾಂಗ್ರೆಸ್ ಸರ್ಕಾರ ಈ ಯೋಜನೆಯ ಕುರಿತು ಸುಳ್ಳು ಹೇಳುತ್ತಿದ್ದು, ಭ್ರಷ್ಟಾಚಾರ ಮಾಡುವ ಉದ್ದೇಶದಿಂದ ಅವರು ಹೊಸ ಯೋಜನೆಗೆ ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ಯಾದಗಿರಿ, ಕಲಬುರಗಿ ಹಾಗೂ ಇತರೆಡೆ ಮನ್ರೇಗಾ ದುರ್ಬಳಕೆಯ ಪ್ರಕರಣಗಳು ಬೆಳಕಿಗೆ ಬಂದಿವೆ. ಹೊಸ ವ್ಯವಸ್ಥೆಯಲ್ಲಿ ಇದನ್ನು ನಿಲ್ಲಿಸಲಾಗುವುದು ಎಂದು ಭರವಸೆ ನೀಡಿದರು.

ಯುಪಿಎ ಸರ್ಕಾರ ಉದ್ಯೋಗ ಖಾತ್ರಿ ಯೋಜನೆಯಡಿ ತನ್ನ ಹತ್ತು ವರ್ಷಗಳ ಅವಧಿಯಲ್ಲಿ ೮ ಸಾವಿರದ ೭೫೯ ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಿದ್ದರೆ, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಹತ್ತು ವರ್ಷಗಳಲ್ಲಿ ಕರ್ನಾಟಕಕ್ಕೆ ೪೮ ಸಾವಿರದ ೫೪೯ ಕೋಟಿ ರೂಪಾಯಿಗೂ ಹೆಚ್ಚು ಅನುದಾನವನ್ನು ಬಿಡುಗಡೆ ಮಾಡಿದೆ ಎಂದು ಅವರು ಹೇಳಿದರು.

ರಾಷ್ಟ್ರೀಯ ಮಟ್ಟದಲ್ಲಿ ಯುಪಿಎ ಸರ್ಕಾರ ೨ ಲಕ್ಷದ ೧೩ ಸಾವಿರ ಕೋಟಿ ರೂಪಾಯಿ ಅನುದಾನ ಗೊತ್ತುಪಡಿಸಿದ್ದರೆ, ಎನ್‌ಡಿಎ ಸರ್ಕಾರ ಈ ಯೋಜನೆಗೆ ೮ ಲಕ್ಷದ ೪೮ ಸಾವಿರ ಕೋಟಿ ರೂಪಾಯಿ ಅನುದಾನ ಪ್ರಕಟಿಸಿದೆ ಎಂದು ಸಚಿವರು ತಿಳಿಸಿದರು.

ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ವಿಧಾನಮಂಡಲದಲ್ಲಿನ ವಿರೋಧ ಪಕ್ಷದ ನಾಯಕರಾದ ಆರ್.ಅಶೋಕ, ಛಲವಾದಿ ನಾರಾಯಣಸ್ವಾಮಿ ಉಪಸ್ಥಿತರಿದ್ದರು.

***************

ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆ-೪ರ ಅಡಿಯಲ್ಲಿ ಜಮ್ಮು ಮತ್ತು ಕಾಶ್ಮೀರ, ಛತ್ತೀಸ್‌ಗಢ, ಉತ್ತರಾಖಂಡ, ರಾಜಸ್ಥಾನ, ಹಿಮಾಚಲ ಪ್ರದೇಶ ಮತ್ತು ಸಿಕ್ಕಿಂಗಳಿಗೆ ೧೦ ಸಾವಿರ ಕಿಲೋಮೀಟರ್‌ಗಳಿಗೂ ಹೆಚ್ಚು ರಸ್ತೆ ಯೋಜನೆಗಳನ್ನು ಸರ್ಕಾರ ಮಂಜೂರು ಮಾಡಿದೆ.

ಈ ರಸ್ತೆಗಳ ನಿರ್ಮಾಣದೊಂದಿಗೆ, ಹಿಂದೆ ಪ್ರತ್ಯೇಕವಾಗಿದ್ದ ಸುಮಾರು ಮೂರು ಸಾವಿರದ ೨೭೦ ಜನವಸತಿಗಳು ಸಂಪರ್ಕ ಮತ್ತು ನಿರ್ಣಾಯಕ ಸೇವೆಗಳನ್ನು ಪಡೆಯುತ್ತವೆ ಎಂದು ಗ್ರಾಮೀಣಾಭಿವೃದ್ಧಿ ಸಚಿವಾಲಯ ತಿಳಿಸಿದೆ.

ಈ ಯೋಜನೆಯು ಸಂಪರ್ಕವಿಲ್ಲದ ಜನವಸತಿಗಳಿಗೆ ೬೨ ಸಾವಿರದ ೫೦೦ ಕಿಲೋಮೀಟರ್‌ಗಳಷ್ಟು ಸರ್ವಋತು ರಸ್ತೆಗಳನ್ನು ಒದಗಿಸುವ ಗುರಿಯನ್ನು ಹೊಂದಿದೆ.

***************

ಲಿಂಗ ತಾರತಮ್ಯ ನಿವಾರಣೆ ಹಾಗೂ ಹೆಣ್ಣು ಮಕ್ಕಳ ಶಿಕ್ಷಣ ಸುಧಾರಣೆ ಉದ್ದೇಶದಿಂದ ಕೇಂದ್ರ ಸರ್ಕಾರ ಆರಂಭಿಸಿರುವ ಮಹತ್ವಾಕಾಂಕ್ಷಿಯ ಬೇಟಿ ಬಚಾವೋ - ಬೇಟಿ ಪಡಾವೋ ಯೋಜನೆ ಆರಂಭವಾಗಿ ಇಂದಿಗೆ ೧೧ ವರ್ಷ ಪೂರ್ಣಗೊಂಡಿದೆ. ೨೦೧೫ರ ಇದೇ ದಿನ ಪ್ರಧಾನಿ ನರೇಂದ್ರ ಮೋದಿ ಅವರು ಈ ಮಹತ್ವದ ಯೋಜನೆಗೆ ಚಾಲನೆ ನೀಡಿದ್ದರು.

***************

ಪ್ರಧಾನಮಂತ್ರಿಗಳ ಸಕ್ರಿಯ ಆಡಳಿತ ಮತ್ತು ಸಕಾಲಿಕ ಅನುಷ್ಠಾನಕ್ಕಾಗಿ ಪ್ರಧಾನ ಮಂತ್ರಿಗಳ ಪ್ರಮುಖ ವೇದಿಕೆಯಾದ ಪ್ರಗತಿ, ತನ್ನ ೫೦ನೇ ಸಭೆಯನ್ನು ಯಶಸ್ವಿಯಾಗಿ ನಡೆಸುವುದರೊಂದಿಗೆ ಮಹತ್ವದ ಮೈಲಿಗಲ್ಲನ್ನು ಗುರುತಿಸಿದೆ.

೨೦೧೫ ರಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಇದನ್ನು ಪ್ರಾರಂಭಿಸಿದ ನಂತರ, ಪ್ರಗತಿಯು ಪ್ರಮುಖ ಮೂಲಸೌಕರ್ಯ ಯೋಜನೆಗಳು ಮತ್ತು ಸಾರ್ವಜನಿಕ ಕುಂದುಕೊರತೆಗಳ ನೈಜ-ಸಮಯದ ಮೇಲ್ವಿಚಾರಣೆ ಮತ್ತು ಪರಿಹಾರವನ್ನು ಸಕ್ರಿಯಗೊಳಿಸುವ ಮೂಲಕ ಆಡಳಿತವನ್ನು ಪರಿವರ್ತಿಸಿದೆ. ವೇದಿಕೆಯು ಸಹಕಾರಿ ಒಕ್ಕೂಟ ವ್ಯವಸ್ಥೆಯ ಉದಾಹರಣೆಯಾಗಿದೆ. ಕೇಂದ್ರ, ರಾಜ್ಯಗಳು ಮತ್ತು ಕೇಂದ್ರ ಸಚಿವಾಲಯಗಳನ್ನು ಒಂದೇ ಡಿಜಿಟಲ್ ಇಂಟರ್ಫೇಸ್‌ನಲ್ಲಿ ಒಗ್ಗೂಡಿಸುತ್ತದೆ.

ಒಂದು ದಶಕದಲ್ಲಿ, ಪ್ರಗತಿಯು ನಿರ್ಧಾರ ತೆಗೆದುಕೊಳ್ಳುವಿಕೆಯನ್ನು ವೇಗಗೊಳಿಸಲು, ಪ್ರಮುಖ ಮೂಲಸೌಕರ್ಯ ಯೋಜನೆಗಳಲ್ಲಿ ವಿಳಂಬಕ್ಕೆ ಕಾರಣವಾಗುವ ಸಮಸ್ಯೆಗಳ ಪರಿಹಾರವನ್ನು ಮತ್ತು ಬಲವಾದ ಹೊಣೆಗಾರಿಕೆಯ ಸಂಸ್ಕೃತಿಯನ್ನು ಹುಟ್ಟುಹಾಕಲು ಸಹಾಯ ಮಾಡಿದೆ. ಇಂದು, ಈ ವಿಶೇಷ ಸರಣಿಯಲ್ಲಿ, ನಾವು ಅಹಮದಾಬಾದ್ ಮೆಟ್ರೋ ರೈಲು ಯೋಜನೆಯನ್ನು ನೋಡೋಣ.

***************

ಜಮ್ಮು ಮತ್ತು ಕಾಶ್ಮೀರದ ದೋಡಾ ಜಿಲ್ಲೆಯಲ್ಲಿ ಇಂದು ನಡೆದ ರಸ್ತೆ ಅಪಘಾತದಲ್ಲಿ ೧೦ ಸೈನಿಕರು ಸಾವನ್ನಪ್ಪಿದ್ದು, ೧೧ ಮಂದಿ ಗಾಯಗೊಂಡಿದ್ದಾರೆ.

ಭದೇರ್ವಾ-ಚಂಬಾ ಅಂತಾರಾಜ್ಯ ರಸ್ತೆಯ ಒಂಬತ್ತು ಸಾವಿರ ಅಡಿ ಎತ್ತರದ ಖನ್ನಿ ಶಿಖರದಲ್ಲಿ ಸೇನಾ ಟ್ರಕ್ ರಸ್ತೆಯಿಂದ ಜಾರಿ ಆಳವಾದ ಕಂದಕಕ್ಕೆ ಉರುಳಿದೆ. ಸೇನೆ ಮತ್ತು ಪೊಲೀಸರು ಜಂಟಿ ರಕ್ಷಣಾ ಕಾರ್ಯಾಚರಣೆಯನ್ನು ತಕ್ಷಣವೇ ಪ್ರಾರಂಭಿಸಲಾಯಿತು.

ನಾಲ್ವರು ಸೈನಿಕರು ಸ್ಥಳದಲ್ಲೇ ಮೃತಪಟ್ಟಿದ್ದು, ನಂತರ ಆರು ಸೈನಿಕರು ಸಾವನ್ನಪ್ಪಿದ್ದಾರೆ. ಗಾಯಗೊಂಡ ಸೈನಿಕರಲ್ಲಿ ಒಬ್ಬರನ್ನು ಭದೇರ್ವಾ ಉಪ-ಜಿಲ್ಲಾ ಆಸ್ಪತ್ರೆಯಲ್ಲಿ ತೀವ್ರ ನಿಗಾದಲ್ಲಿ ಇರಿಸಲಾಗಿದ್ದು, ೧೦ ಸೈನಿಕರನ್ನು ವಿಶೇಷ ಚಿಕಿತ್ಸೆಗಾಗಿ ಉಧಂಪುರ ಕಮಾಂಡ್ ಆಸ್ಪತ್ರೆಗೆ ಹೆಲಿಕಾಪ್ಟರ್ ಮೂಲಕ ಸಾಗಿಸಲಾಗಿದೆ.

ಘಟನೆ ಬಗ್ಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ದುಃಖ ವ್ಯಕ್ತಪಡಿಸಿದ್ದಾರೆ.

***************

ಭಾರತ-ಯುರೋಪಿಯನ್ ಯೂನಿಯನ್‌ಗಳ ಬಲಿಷ್ಠ ಸಂಬಂಧಗಳು ತಡೆರಹಿತ ಸರಬರಾಜು ಹಾಗೂ ಸಹಕಾರದ ಮೂಲಕ ಜಾಗತಿಕ ಆರ್ಥಿಕತೆಗೆ ಇರುವ ಅಪಾಯಗಳನ್ನು ಕಡಿಮೆ ಮಾಡಲಿದೆ. ವ್ಯಾಪಾರ, ಜನರ ಸಂಚಾರ ಮತ್ತು ಭದ್ರತಾ ಪಾಲುದಾರಿಕೆಯನ್ನು ಬಲಪಡಿಸುವ ಮೂಲಕ ಜಾಗತಿಕ ವ್ಯವಸ್ಥೆಯನ್ನು ಸ್ಥಿರಗೊಳಿಸಲಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಇಂದು ಹೇಳಿದ್ದಾರೆ.

***************

ಈ ವರ್ಷದ ಗಣರಾಜ್ಯೋತ್ಸವದ ಮೆರವಣಿಗೆಯನ್ನು ಭಾರತೀಯ ವಾಯುಪಡೆ ಮತ್ತು ಐಎಎಫ್ ರಕ್ಷಣಾ ಪಡೆಗಳು ಮುನ್ನಡೆಸಲಿವೆ ಎಂದು ಸಮಾರಂಭ ನಿರ್ದೇಶನಾಲಯದ ವಾಯು ಕಮಾಂಡರ್ ಇಮ್ರಾನ್ ಜೈನಿ ಇಂದು ತಿಳಿಸಿದ್ದಾರೆ.

ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ವರ್ಷದ ಗಣರಾಜ್ಯೋತ್ಸವದ ಮೆರವಣಿಗೆಯಲ್ಲಿ ಐಎಎಫ್ ಗೌರವ ಸಮರ್ಪಣೆಯ ನೇತೃತ್ವವನ್ನು ಸ್ಕ್ವಾಡ್ರನ್ ಲೀಡರ್ ಹೇಮಂತ್ ಸಿಂಗ್ ಕನ್ಯಾರ್ ವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

***************

ವಡೋದರಾದ ಕೋಟಂಬಿಯ ಬಿಸಿಎ ಕ್ರೀಡಾಂಗಣದಲ್ಲಿ ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್ ಪಂದ್ಯದಲ್ಲಿ ಯುಪಿ ವಾರಿಯರ್ಸ್ ಮತ್ತು ಗುಜರಾತ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಯುಪಿ ವಾರಿಯರ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

*******ಮುಕ್ತಾಯ*******